Akashvani: Bangalore
National Bulletin In Kannada
11.09.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
11.09.2026: 13.10hrs
**********

**ಮುಖ್ಯಾಂಶಗಳು :**

1. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ಭಾರತದ ಅಧ್ಯಕ್ಷತೆಯಲ್ಲಿ ಬ್ರಿಕ್ಸ್ ಶೃಂಗಸಭೆ; ನವದೆಹಲಿಗೆ ವಿವಿಧ ರಾಷ್ಟ್ರಗಳ ನಾಯಕರ ಆಗಮನ
3. ನವದೆಹಲಿಯ ಭಾರತ್ ಮಂಟಪದಲ್ಲಿಂದು ಬ್ರಿಕ್ಸ್ ವಾಣಿಜ್ಯ ಸಭೆ -೨೦೨೬ಕ್ಕೆ ಚಾಲನೆ
4. ಯುಎಸ್ ಓಪನ್ ಟೆನಿಸ್: ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ಗೆ ಅರಿನಾ ಸಬಲೆಂಕಾ, ಎಲೆನಾ ರೈಬಾಕಿನಾ ಲಗ್ಗೆ

**********

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಉಭಯ ನಾಯಕರು ಪರಸ್ಪರ ಹಿತಾಸಕ್ತಿಯ ವಿವಿಧ ವಿಷಯಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ರಷ್ಯಾ-ಉಕ್ರೇನ್ ಸಂಘರ್ಷ, ಪಶ್ಚಿಮ ಏಷ್ಯಾದ ಪರಿಸ್ಥಿತಿ, ವ್ಯಾಪಾರ ಸಂಬಂಧಗಳು ಮತ್ತು ಇಂಧನ ಸಹಕಾರದಂತಹ ವಿಷಯಗಳು ಮಾತುಕತೆ ವೇಳೆ ಪ್ರಸ್ತಾಪವಾಗುವ ಸಾಧ್ಯತೆಯಿದೆ. ನಾಳೆಯಿಂದ ಆರಂಭವಾಗಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಇಂದು ನವದೆಹಲಿಗೆ ಆಗಮಿಸಿದ್ದಾರೆ. ಇದೇ ವೇಳೆ, ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಪಶ್ಚಿಮ ಏಷ್ಯಾದಲ್ಲಿನ ಪ್ರಸ್ತುತ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಈ ಭೇಟಿಯು ಮಹತ್ವದ್ದಾಗಿದೆ. ಪ್ರಾದೇಶಿಕ ಬೆಳವಣಿಗೆಗಳ ಕುರಿತು ಉಭಯ ನಾಯಕರು ಚರ್ಚಿಸುವ ಸಾಧ್ಯತೆಯಿದೆ.

**********

೧೮ನೇ ಬ್ರಿಕ್ಸ್ ಶೃಂಗಸಭೆ ನಾಳೆ ನವದೆಹಲಿಯ ಭಾರತ್ ಮಂಟಪದಲ್ಲಿ ಆರಂಭವಾಗಲಿದೆ. ಎರಡು ದಿನಗಳ ಶೃಂಗಸಭೆಯಲ್ಲಿ ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಇಂಡೋನೇಷ್ಯಾ, ಭಾರತ, ಇರಾನ್, ರಷ್ಯಾ, ಸೌದಿ ಅರೇಬಿಯಾ, ದಕ್ಷಿಣ ಆಫ್ರಿಕಾ ಮತ್ತು ಯುಎಇ ಸೇರಿದಂತೆ ೧೧ ಪ್ರಮುಖ ಉದಯೋನ್ಮುಖ ಹಾಗೂ ಅಭಿವೃದ್ಧಿಶೀಲ ರಾಷ್ಟ್ರಗಳು ಭಾಗವಹಿಸಲಿವೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ ನಿರ್ಮಾಣ' ಎಂಬುದು ಈ ವರ್ಷದ ಬ್ರಿಕ್ಸ್ ಶೃಂಗಸಭೆಯ ಧ್ಯೇಯವಾಕ್ಯವಾಗಿದೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್, ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ ಸೇರಿದಂತೆ ಹಲವು ರಾಷ್ಟ್ರಗಳ ನಾಯಕರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಸೇರಿದಂತೆ ವಿವಿಧ ಅಂತಾರಾಷ್ಟ್ರೀಯ ಸಂಸ್ಥೆಗಳ ಮುಖ್ಯಸ್ಥರೂ ಪಾಲ್ಗೊಳ್ಳಲಿದ್ದಾರೆ.

**********

ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ ಮತ್ತು ಉಗಾಂಡಾ ಉಪಾಧ್ಯಕ್ಷೆ ಜೆಸ್ಸಿಕಾ ಅಲುಪೋ ನವದೆಹಲಿಗೆ ಆಗಮಿಸಿದ್ದಾರೆ. ವಿಮಾನ ನಿಲ್ದಾಣದಲ್ಲಿ ಅವರನ್ನು ಕೇಂದ್ರ ಸಚಿವ ಜಯಂತ್ ಸಿಂಗ್ ಸ್ವಾಗತಿಸಿದರು. ಇದೇ ವೇಳೆ, ಶೃಂಗಸಭೆಯಲ್ಲಿ ಭಾಗವಹಿಸಲು ನೈಜೀರಿಯಾ ವಿದೇಶಾಂಗ ಸಚಿವೆ ಬಿಯಾಂಕಾ ಒಡುಮೆಗ್ವು-ಒಜುಕ್ವು ಮತ್ತು ಉರುಗ್ವೆ ವಿದೇಶಾಂಗ ಸಚಿವ ಮಾರಿಯೋ ಲುಬೆಟ್ಕಿನ್ ಕೂಡ ರಾಷ್ಟ್ರ ರಾಜಧಾನಿಗೆ ಆಗಮಿಸಿದ್ದಾರೆ. ಮಾರಿಯೋ ಲುಬೆಟ್ಕಿನ್ ಅವರು ಬ್ರಿಕ್ಸ್ ಶೃಂಗಸಭೆಯಲ್ಲಿ 'ಲ್ಯಾಟಿನ್ ಅಮೆರಿಕನ್ ಮತ್ತು ಕೆರಿಬಿಯನ್ ರಾಷ್ಟ್ರಗಳ ಸಮುದಾಯ'ವನ್ನು ಪ್ರತಿನಿಧಿಸಲಿದ್ದಾರೆ.

**********

ಬ್ರಿಕ್ಸ್ ರಾಷ್ಟ್ರಗಳು ತಮ್ಮ ಆರ್ಥಿಕ ಸಾಮರ್ಥ್ಯವನ್ನು ಉದ್ಯೋಗ, ಸಂಪತ್ತು ಮತ್ತು ಜನರ ಸಮೃದ್ಧಿಯಾಗಿ ಪರಿವರ್ತಿಸಲು ಒಗ್ಗೂಡಿ ಕಾರ್ಯನಿರ್ವಹಿಸಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕರೆ ನೀಡಿದ್ದಾರೆ. ಬ್ರಿಕ್ಸ್ ರಾಷ್ಟ್ರಗಳು ವಿಶ್ವದ ಸುಮಾರು ಅರ್ಧದಷ್ಟು ಜನಸಂಖ್ಯೆ ಹಾಗೂ ಜಾಗತಿಕ ಜಿಡಿಪಿಯ ಶೇಕಡಾ ೪೦ರಷ್ಟನ್ನು ಪ್ರತಿನಿಧಿಸುತ್ತವೆ. ಜಾಗತಿಕ ವ್ಯಾಪಾರದಲ್ಲಿ ಬ್ರಿಕ್ಸ್ ಪಾಲು ಸುಮಾರು ನಾಲ್ಕನೇ ಒಂದು ಭಾಗದಷ್ಟಿದ್ದು, ಅಂತರ್-ಬ್ರಿಕ್ಸ್ ವ್ಯಾಪಾರದಲ್ಲಿ ಭಾರತ ಪ್ರಮುಖ ಆಧಾರಸ್ತಂಭವಾಗಿ ಹೊರಹೊಮ್ಮಿದೆ ಎಂದು ಅವರು ಹೇಳಿದರು.ಬ್ರಿಕ್ಸ್ ರಾಷ್ಟ್ರಗಳ ನಡುವಿನ ವ್ಯಾಪಾರವು ಬಲಿಷ್ಠ, ಸುಸ್ಥಿರ ಮತ್ತು ವೈವಿಧ್ಯಮಯ ಪೂರೈಕೆ ಸರಪಳಿಗಳಿಂದ ಬೆಂಬಲಿತವಾಗಿರಬೇಕು. ಸದಸ್ಯ ರಾಷ್ಟ್ರಗಳು ಕಚ್ಚಾ ವಸ್ತುಗಳು ಮತ್ತು ನಿರ್ಣಾಯಕ ಖನಿಜಗಳು ಸೇರಿದಂತೆ ಪರಸ್ಪರ ಉತ್ಪನ್ನಗಳಿಗೆ ತಮ್ಮ ಮಾರುಕಟ್ಟೆಗಳನ್ನು ಮುಕ್ತಗೊಳಿಸಬೇಕು ಎಂದು ಪಿಯೂಷ್ ಗೋಯಲ್ ಒತ್ತಾಯಿಸಿದರು.

**********

ನವದೆಹಲಿಯ ಭಾರತ್ ಮಂಟಪದಲ್ಲಿ ಇಂದು ಬ್ರಿಕ್ಸ್ ವಾಣಿಜ್ಯ ಸಭೆ ೨೦೨೬ ನಡೆಯಲಿದೆ. ದಿನವಿಡೀ ನಡೆಯುವ ಸಭೆಯಲ್ಲಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಒಂದು ಸಾವಿರಕ್ಕೂ ಹೆಚ್ಚು ಉದ್ಯಮಿಗಳು, ವಾಣಿಜ್ಯ ಸಚಿವರು, ಹಣಕಾಸು ಕ್ಷೇತ್ರದ ನಾಯಕರು, ಜಾಗತಿಕ ಹೂಡಿಕೆದಾರರು ಹಾಗೂ ಕೈಗಾರಿಕಾ ತಜ್ಞರು ಭಾಗವಹಿಸಲಿದ್ದಾರೆ. ಬ್ರಿಕ್ಸ್ ಉದ್ಯಮ ಮಂಡಳಿ, ಎಫ್ಐಸಿಸಿಐ, ಸಿಐಐ ಮತ್ತು ಅಸೋಚೆಮ್ ಸಹಯೋಗದಲ್ಲಿ ಆಯೋಜಿಸಿರುವ ಈ ಸಭೆ, ೧೮ನೇ ಬ್ರಿಕ್ಸ್ ನಾಯಕರ ಶೃಂಗಸಭೆಗೆ ಮುನ್ನ ನಡೆಯುವ ಪ್ರಮುಖ ವಾಣಿಜ್ಯ ಸಮಾವೇಶವಾಗಿದೆ. 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ' ವಿಷಯದಡಿ ನಡೆಯುವ ವೇದಿಕೆಯಲ್ಲಿ ಬ್ರಿಕ್ಸ್ ರಾಷ್ಟ್ರಗಳ ನಡುವಿನ ವ್ಯಾಪಾರ ವೃದ್ಧಿ, ಬಲಿಷ್ಠ ಪೂರೈಕೆ ಸರಪಳಿ ನಿರ್ಮಾಣ ಹಾಗೂ ಗಡಿಯಾಚೆಗಿನ ಹೂಡಿಕೆ ಅವಕಾಶಗಳ ಕುರಿತು ಚರ್ಚೆ ನಡೆಯಲಿದೆ.

**********

ಅಮೆರಿಕದ ಹ್ಯೂಸ್ಟನ್‌ನಲ್ಲಿ ಇದೇ ತಿಂಗಳ ೧೪ರಿಂದ ೧೬ರವರೆಗೆ ನಡೆಯಲಿರುವ ಜಿ-೨೦ ಇಂಧನ ಸಚಿವರ ಸಭೆಯಲ್ಲಿ ಕೇಂದ್ರ ಇಂಧನ, ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಭಾಗವಹಿಸಲಿದ್ದಾರೆ. ಅಮೆರಿಕದ ಜಿ-೨೦ ಅಧ್ಯಕ್ಷತೆಯಡಿ ನಡೆಯುವ ಸಭೆಯಲ್ಲಿ ಜಾಗತಿಕ ಇಂಧನ ಭದ್ರತೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸುಸ್ಥಿರ ಇಂಧನ ಪೂರೈಕೆ ಸರಪಳಿ ಕುರಿತು ಚರ್ಚೆ ನಡೆಯಲಿದೆ. ಇಂಧನ ಭದ್ರತೆ ಮತ್ತು ಕೈಗೆಟುಕುವ ದರದಲ್ಲಿ ಮೂಲ ಇಂಧನ, ಅನುಮತಿ ಹಾಗೂ ನಿಯಂತ್ರಣ ವ್ಯವಸ್ಥೆಯ ದಕ್ಷತೆ, ನಿರ್ಣಾಯಕ ಖನಿಜಗಳು ಮತ್ತು ಸುಸ್ಥಿರ ಪೂರೈಕೆ ಸರಪಳಿ ಕುರಿತ ಸಚಿವರ ಅಧಿವೇಶನಗಳಲ್ಲಿ ಸಚಿವ ಮನೋಹರ್ ಲಾಲ್ ಭಾಗವಹಿಸಲಿದ್ದಾರೆ.

**********

ಭಾರತದ ಆರ್ಥಿಕತೆ ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಶೇಕಡಾ ೭.೮ರಷ್ಟು ವೃದ್ಧಿಯಾಗಿರುವ ಹಿನ್ನೆಲೆಯಲ್ಲಿ, ಅಂತಾರಾಷ್ಟ್ರೀಯ ಹಣಕಾಸು ನಿಧಿ- ಐಎಂಎಫ್, ಭಾರತವನ್ನು ಜಾಗತಿಕ ಆರ್ಥಿಕ ಬೆಳವಣಿಗೆಯ ಪ್ರಮುಖ ಚಾಲಕ ಶಕ್ತಿಯಾಗಿದೆ ಎಂದು ಶ್ಲಾಘಿಸಿದೆ. ಸೇವಾ ವಲಯ ಮತ್ತು ರಫ್ತು ಕ್ಷೇತ್ರದ ಉತ್ತಮ ಸಾಧನೆಯಿಂದ ನಿರೀಕ್ಷೆಗಿಂತ ಹೆಚ್ಚಿನ ಆರ್ಥಿಕ ಬೆಳವಣಿಗೆ ಸಾಧ್ಯವಾಗಿದೆ ಎಂದು ಐಎಂಎಫ್ ಸಂವಹನ ವಿಭಾಗದ ನಿರ್ದೇಶಕಿ ಜೂಲಿ ಕೊಜಾಕ್ ತಿಳಿಸಿದ್ದಾರೆ.

**********

ಇಂದು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನ. ದೇಶದ ಅರಣ್ಯ, ವನ್ಯಜೀವಿ ಮತ್ತು ಜೀವವೈವಿಧ್ಯ ಸಂರಕ್ಷಣೆಯಲ್ಲಿ ಪ್ರಾಣತ್ಯಾಗ ಮಾಡಿದ ಅರಣ್ಯ ರಕ್ಷಕರು, ಅಧಿಕಾರಿಗಳು ಹಾಗೂ ಸಮುದಾಯದ ಸದಸ್ಯರನ್ನು ಈ ದಿನ ಸ್ಮರಿಸಲಾಗುತ್ತದೆ. ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಅವರು ಸುಸ್ಥಿರ ಭವಿಷ್ಯಕ್ಕಾಗಿ ಪ್ರಾಣತ್ಯಾಗ ಮಾಡಿದ ಅರಣ್ಯ ಅಧಿಕಾರಿ, ಸಿಬ್ಬಂದಿಗೆ ಗೌರವ ನಮನ ಸಲ್ಲಿಸಿದ್ದಾರೆ.

**********

ನ್ಯೂಯಾರ್ಕ್‌ನಲ್ಲಿ ಇಂದು ನಡೆದ ಯುಎಸ್ ಓಪನ್ ಟೆನಿಸ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಎಲೆನಾ ರೈಬಾಕಿನಾ ೩-೬, ೬-೪, ೬-೪ ಸೆಟ್‌ಗಳಿಂದ ಕೊಕೊ ಗಾಫ್ ಅವರನ್ನು ಸೋಲಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಮತ್ತೊಂದು ಮಹಿಳಾ ಸಿಂಗಲ್ಸ್ ಸೆಮಿಫೈನಲ್ ಪಂದ್ಯದಲ್ಲಿ ಅರಿನಾ ಸಬಲೆಂಕಾ ೭-೫, ೬-೨ ಸೆಟ್‌ಗಳಿಂದ ಜೆಸಿಕಾ ಪೆಗುಲಾ ಅವರನ್ನು ಸೋಲಿಸಿ, ಫೈನಲ್ ಪ್ರವೇಶಿಸಿದ್ದಾರೆ. ಮಹಿಳಾ ಡಬಲ್ಸ್ ಫೈನಲ್‌ನಲ್ಲಿ ಕಟೆರಿನಾ ಸಿನಿಯಾಕೋವಾ ಮತ್ತು ರಾಬಿನ್ ಮಾಂಟ್‌ಗೊಮೆರಿ ಜೋಡಿ, ಟೇಲರ್ ಟೌನ್‌ಸೆಂಡ್ ಮತ್ತು ಆಶ್ಲಿನ್ ಕ್ರೂಗರ್ ಜೋಡಿಯನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಇಂದು ರಾತ್ರಿ ೯.೩೦ಕ್ಕೆ ಆರಂಭವಾಗಲಿದೆ. ಪುರುಷರ ಸಿಂಗಲ್ಸ್‌ನಲ್ಲಿ ಬೆನ್ ಶೆಲ್ಟನ್ ಮತ್ತು ಫ್ರಾನ್ಸಿಸ್ ಟಿಯಾಫೋ ನಡುವೆ ಸೆಮಿಫೈನಲ್ ಪಂದ್ಯ ನಡೆಯಲಿದೆ. ಮತ್ತೊಂದು ಸೆಮಿಫೈನಲ್‌ನಲ್ಲಿ ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಅವರು ಕರೆನ್ ಖಚನೋವ್ ಅವರನ್ನು ಎದುರಿಸಲಿದ್ದಾರೆ. ಎರಡೂ ಪಂದ್ಯಗಳು ನಾಳೆ ನಡೆಯಲಿವೆ.

**********

ಚೀನಾದ ಮೋಕಿಯಲ್ಲಿ ನಡೆಯುತ್ತಿರುವ ಜೂನಿಯರ್ ಏಷ್ಯಾ ಕಪ್ ಹಾಕಿ ಪಂದ್ಯಾವಳಿಯ ಸೆಮಿಫೈನಲ್‌ನಲ್ಲಿ, ಭಾರತದ ಪುರುಷರ ತಂಡ ಇಂದು ಮಲೇಷ್ಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨:೧೫ಕ್ಕೆ ಆರಂಭವಾಗಲಿದೆ. ಐದು ಬಾರಿ ಚಾಂಪಿಯನ್ ಆಗಿರುವ ಭಾರತ ತಂಡ, 'ಎ' ಗುಂಪಿನ ಅಂತಿಮ ಪಂದ್ಯದಲ್ಲಿ ಚೈನೀಸ್ ತೈಪೆ ವಿರುದ್ಧ ೧೫-೦ ಅಂತರದ ಭರ್ಜರಿ ಗೆಲುವು ಸಾಧಿಸುವ ಮೂಲಕ ಅಂತಿಮ ನಾಲ್ಕರ ಹಂತ ಪ್ರವೇಶಿಸಿತು.

**********

ಮಹಾರಾಷ್ಟ್ರದ ನಾಂದೇಡ್-ಭೋಕರ್ ರಸ್ತೆಯಲ್ಲಿರುವ ಸಿತಾಖಂಡಿ ಘಾಟ್‌ನಲ್ಲಿ ಸಂಭವಿಸಿದ ಅಪಘಾತದಲ್ಲಿ ಎಂಟು ಮಂದಿ ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ನಾಂದೇಡ್‌ನಿಂದ ಭೋಕರ್‌ಗೆ ತೆರಳುತ್ತಿದ್ದ ಮಿನಿ ವ್ಯಾನ್‌ಗೆ ಗ್ರಾಮದ ಬಳಿ ಟ್ರಕ್ ಡಿಕ್ಕಿ ಹೊಡೆಯಿತು. ಡಿಕ್ಕಿಯ ರಭಸಕ್ಕೆ ಪ್ರಯಾಣಿಕರ ವಾಹನ ನಜ್ಜು-ಗುಜ್ಜಾಗಿದೆ. ಘಟನಾ ಸ್ಥಳದಲ್ಲೇ ಆರು ಮಂದಿ ಮೃತಪಟ್ಟರೆ, ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಇಬ್ಬರು ಗಾಯಾಳುಗಳು

ಮೃತಪಟ್ಟಿದ್ದಾರೆ. ಇತರ ನಾಲ್ವರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಭೋಕರ್ ಮತ್ತು ನಾಂದೇಡ್‌ನ ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಅಪಘಾತದಲ್ಲಿ ಟ್ರಕ್ ಚಾಲಕ ಕೂಡ ಗಂಭೀರವಾಗಿ ಗಾಯಗೊಂಡಿದ್ದಾರೆ.

**********